# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 53 (15) |
| ಸದಸ್ಯರ ಹೆಸರು | ಶ್ರೀ ಎಂ ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 13.02.2023. |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಜೀವನೋಪಾಯ ಹಾಗೂ ಉದ್ಯಮಶೀಲತೆ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಏಳು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳನ್ನು ಪ್ರತಿಷ್ಠಿತ ವಿದೇಶಿ ವಿಶ್ವವಿದ್ಯಾಲಯಗಳೊಂದಿಗೆ ಒಪ್ಪಂದ ಮಾಡಿಕೊಂಡು 'ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ' ಗಳನ್ನಾಗಿ ಉನ್ನತೀಕರಣಗೊಳಿಸುವ ಕ್ರಿಯಾ ಯೋಜನೆ ಯಾವ ಹಂತದಲ್ಲಿದೆ; ಹಾಗೂ ಇದಕ್ಕೆ ಯಾವ ಏಳು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳನ್ನು ಆಯ್ಕೆ ಮಾಡಲಾಗಿದೆ ಹಾಗೂ ಈ ಯೋಜನೆಗೆ ಮೀಸಲಿಟ್ಟಿರುವ ಅನುದಾನವೆಷ್ಟು; (ಸಂಪೂರ್ಣ ವಿವರ ನೀಡುವುದು) | 2022-23ನೇ ಆರ್ಥಿಕ ಸಾಲಿನ ಆಯ-ವ್ಯಯ ಕಂಡಿಕೆ-102ರಲ್ಲಿನ ಘೋಷಣೆಯಂತೆ ಅತ್ಯುನ್ನತ ಗುಣಮಟ್ಟದ ತಾಂತ್ರಿಕ ಬೋಧನ-ಕಲಿಕೆಗಳಿಗೆ ಹಾಗೂ ಸಂಶೋಧನೆಯನ್ನು ಉತ್ತೇಜಿಸಲು ಈ ಕೆಳಕಂಡ ಏಳು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳನ್ನು "Karnataka Institute of Technology" ಗಳನ್ನಾಗಿ ಉನ್ನತೀಕರಿಸಲು ಗುರುತಿಸಲಾಗಿದೆ. ಈ ಏಳು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳನ್ನು "Karnataka Institute of Technology" ಗಳನ್ನಾಗಿ ಉನ್ನತೀಕರಿಸುವ ಯೋಜನೆಗೆ ವಿವರವಾದ ಕಾರ್ಯವರದಿಯನ್ನು ಸಲ್ಲಿಸುವ ಉದ್ದೇಶಕ್ಕಾಗಿ ಶೈಕ್ಷಣಿಕ ತಜ್ಞರ ಕಾರ್ಯಪಡೆಯನ್ನು ರಚಿಸಿ ಆದೇಶಿಸಿದ್ದು, ತಜ್ಞ ಸಮಿತಿಯು ವರದಿಯನ್ನು ನೀಡಿದೆ. |

| ಕ್ರ. ಸಂ | ಉನ್ನತೀಕರಿಸಲು ಗುರುತಿಸಲಾದ ಸಂಸ್ಥೆಯ ಹೆಸರು |
|---|---|
| 1 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾಸನ. |
| 2 | SKSJIT, ಬೆಂಗಳೂರು. |
| 3 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ. |
| 4 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು,ಕೆ.ಆರ್.ಪೇಟೆ |
| 5 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಮನಗರ |
| 6 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ತಳಕಲ್, ಕೊಪ್ಪಳ ಜಿಲ್ಲೆ. |
| 7 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕಾರವಾರ. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| | | "Karnataka Institute of Technology" ಗಳ ಉನ್ನತೀಕರಣಕ್ಕಾಗಿ 2022-23ನೇ ಸಾಲಿನ ಆಯವ್ಯಯದಲ್ಲಿ ರೂ.21.00ಕೋಟಿಗಳನ್ನು ಒದಗಿಸಲಾಗಿದೆ. |
| (ಆ) | ಚಾಮರಾಜನಗರ, ಬೀದರ್, ಹಾವೇರಿ, ಹಾಸನ, ಕೊಡಗು, ಕೊಪ್ಪಳ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ವಿನೂತನ ಮಾದರಿಯ ಏಳು ವಿಶ್ವವಿದ್ಯಾಲಯಗಳ ಸ್ಥಾಪನೆಯಾಗಿದೆಯೇ; (ಈ ಯೋಜನೆಯ ಸಂಪೂರ್ಣ ವಿವರ ನೀಡುವುದು) | ಹೌದು,<br>2022-23ನೇ ಸಾಲಿನ ಆಯವ್ಯಯ ಘೋಷಣೆಯಂತೆ ಸರ್ಕಾರದ ಆದೇಶ ಸಂಖ್ಯೆ: ಇಡಿ 81 ಯುಎನ್ಇ 2022, ದಿನಾಂಕ:18.04.2022ರನ್ವಯ ವಿನೂತನ ಮಾದರಿಯ 07 ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಿ ಆದೇಶಿಸಲಾಗಿದೆ. ವಿಶ್ವವಿದ್ಯಾಲಯಗಳನ್ನು ಕಾರ್ಯಾರಂಭ ಮಾಡಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ. |

ಸಂಖ್ಯೆ: ಇಡಿ 18 ಹೆಚ್‌ಪಿಟಿ 2023)

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ,
ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ,
ಜೀವನೋಪಾಯ ಹಾಗೂ ಉದ್ಯಮಶೀಲತೆ ಸಚಿವರು.